# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ: 07-10-2021 ರಂದು ಸಮಯ 12.00 ಗಂಟೆಗೆ ವಾರ್ಡ್ ಸಂಖ್ಯೆ: 155 ಹನುಮಂತನಗರಕ್ಕೆ ಸಂಬಂಧಪಟ್ಟಂತೆ ಹರಿಹರಗುಡ್ಡ ಉದ್ಯಾನವನ (ತಿಮ್ಮೇಶಪ್ರಭು ಉದ್ಯಾನವನ)ದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳು.**

1. ಶ್ರೀಮತಿ ಉಮಾದೇವಿ ಬಳಿಗಾರ್, ನೋಡಲ್ ಅಧಿಕಾರಿಗಳು – ಅಧ್ಯಕ್ಷರು
2. ಶ್ರೀ ಆನಂದ್.ಜಿ, ಸಹಾಯಕ ಅಭಿಯಂತರರು ವಾ.ನಂ.-155 – ಸದಸ್ಯ ಕಾರ್ಯದರ್ಶಿ
3. ಶ್ರೀ. ನಟರಾಜ್ (ಹಿ.ಆ.ಪ.) (ಹಿ.ಆ.ಪ.) – ಸದಸ್ಯರು
4. ಶ್ರೀ ಪ್ರಕಾಶ್ (ಟಿ.ಇ.)– ಸದಸ್ಯರು
5. ಶ್ರೀ.ರಾಮಚಂದ್ರ (ಕಿ.ಅ–155) ಬೆಸ್ಕಾಂ
6. ಕೃಷ್ಣಮೂರ್ತಿ–ಜಲ ಪರಿವೀಕ್ಷಕರು ಬಿಡಬ್ಲ್ಯೂಎಸ್ಎಸ್‌ಬಿ
7. ಸ್ವಾಮಿಗೌಡ– ತೋಟಗಾರಿಕೆ ಇಲಾಖೆ
8. ಶ್ರೀ ಉದಯ– ಸಾರ್ವಜನಿಕರು.
9. ಶ್ರೀಮತಿ.ದೇವಕಿ.ಎನ್– ಸಾರ್ವಜನಿಕರು.
10. ಪ್ರೇಮಲತ – ಸಾರ್ವಜನಿಕರು.
11. ಲಿತೇಶ್– ಸಾರ್ವಜನಿಕರು.

****

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ನಂ 155ರ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರು ತಿಳಿಸಿರುವ ಮೇರೆಗೆ ನೆರೆದಿದ್ದ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರನ್ನು / ಅಧಿಕಾರಿಗಳನ್ನು ಮತ್ತು ಸ್ಥಳೀಯ ಸಾರ್ವಜನಿಕರಿಗೆ ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

**ಕಾಮಗಾರಿ ಇಲಾಖೆಗೆ ಸಂಬಂಧಪಟ್ಟ ವಿಷಯಗಳು.**

1) 4ನೇ ಅಡ್ಡರಸ್ತೆ ಹನುಮಂತನಗರದಲ್ಲಿ ಚರಂಡಿ ಅಭಿವೃದ್ಧಿ ಕಾಮಗಾರಿ ನಡೆಯುತ್ತಿರುವುದರಿಂದ ಚರಂಡಿಯ ಮಣ್ಣನ್ನು ರಸ್ತೆಯ ಹಾಕಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತುಂಬಾ ತೊದರೆಯಾಗುತ್ತಿದೆ ಎಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ವಿಷಯದ ಕುರಿತು ಸ್ಥಳ ಪರಿವೀಕ್ಷಣೆ/ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಕಿರಿಯ ಅಭಿಯಂತರರು ಹನುಮಂತನಗರ ರವರು ತಿಳಿಸಿದರು.

2. ಲಕ್ಷ್ಮೀಪುರ 1ನೇ ಅಡ್ಡರಸ್ತೆಯಲ್ಲಿ ಕಟ್ಟಡದ ತ್ಯಾಜ್ಯ, ಕಸದ ರಾಶಿ ಹಾಗೂ ಅನುಪಯುಕ್ತ ವಸ್ತುಗಳನ್ನು ತೆರವುಗೊಳಿಸಲು ಕ್ರಮಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ವಿಷಯದ ಕುರಿತು ಸ್ಥಳ ಪರಿವೀಕ್ಷಣೆ/ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಕಿರಿಯ ಅಭಿಯಂತರರು ಹನುಮಂತನಗರ ರವರು ತಿಳಿಸಿದರು.

ಪು.ತಿ.ನೋ

Scanned by Scanner Go

**ತೋಟಗಾರಿಕೆ ಇಲಾಖೆ:**

1) ಹನುಮಂತನಗರ ವಾರ್ಡ್‌ನಲ್ಲಿ ಬರುವ ಹರಿಹರಗುಡ್ಡ ಪಾರ್ಕ್‌ನಲ್ಲಿ ಭದ್ರತಾ ಸಿಬ್ಬಂದಿಗೆ ಇರುವ ಮನೆಯಲ್ಲಿ ಅನಧಿಕೃತವಾಗಿ ವಾಸವಾಗಿರುವವರನ್ನು ಕೂಡಲೆ ಖಾಲಿ ಮಾಡಿಸಲು ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ಪಾರ್ಕ್‌ಗಳ ನಿರ್ವಹಣೆಯ ಬಗ್ಗೆ ತೋಟಗಾರಿಕೆ ಅಧೀಕ್ಷಕರು(ದ) ಬಿ.ಬಿ.ಎಂ.ಪಿ ರವರಿಗೆ ಸೂಕ್ತ ಕ್ರಮಕೈಗೊಳ್ಳಲು ಕೋರಲಾಗಿರುತ್ತದೆ.

**BWSSB ಇಲಾಖೆ:**

1) ಶ್ರೀನಗರ ಪೈಪ್‌ಲೈನ್ 5ನೇ ಮುಖ್ಯರಸ್ತೆ ಹಾಗೂ ಬ್ರಹ್ಮಪುತ್ರ ನದಿ ರಸ್ತೆಯಲ್ಲಿ ಕುಡಿಯುವ ನೀರು ಸರಿಯಾಗಿ ಬರುತ್ತಿರುವುದಿಲ್ಲ, ಕುಡಿಯುವ ನೀರಿನ ಸಮಸ್ಯೆಯನ್ನು ಸರಿಪಡಿಸಿಕೊಡುವಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಕೋರಿದರು.

ಸದರಿ ಕುಡಿಯುವ ನೀರಿನ ಸಮಸ್ಯೆಯನ್ನು ಶೀಘ್ರವಾಗಿ ಸರಿಪಡಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು(BWSSB) ಎಂ.ಎನ್.ಕೆ ಪಾರ್ಕ್ ರವರಿಗೆ ಸೂಕ್ತ ಕ್ರಮಕೈಗೊಳ್ಳಲು ಕೋರಲಾಗಿರುತ್ತದೆ.

ವಾರ್ಡ್ ಕಮಿಟಿ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿ ವರ್ಗದವರಿಗೆ, ವಾರ್ಡ್ ಕಮಿಟಿ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ಪ್ರತಿ ತಿಂಗಳ ಮೊದಲನೆಯ ಮತ್ತು ಮೂರನೇ ಶನಿವಾರದಂದು ವಾರ್ಡ್ ಕಮಿಟಿ ಸಭೆಯನ್ನು ಏರ್ಪಡಿಸಲಾಗುವುದು ಎಂದು ತಿಳಿಸುತ್ತಾ, ವಂದನಾರ್ಪಣೆ ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| 7/10/21<br>ಕಾರ್ಯದರ್ಶಿ<br>ಸಹಾಯಕ ಅಭಿಯಂತರರು<br>ವಾರ್ಡ್ ಸಂಖ್ಯೆ-155 ಹನುಮಂತನಗರ | ಅಧ್ಯಕ್ಷರು ವಾರ್ಡ್ ಸಮಿತಿ<br>ಹಾಗೂ ನೋಡಲ್ ಅಧಿಕಾರಿಗಳು<br>ವಾರ್ಡ್ ಸಂಖ್ಯೆ-155 ಹನುಮಂತನಗರ |

ಪ್ರತಿಯನ್ನು,

1. ಮಾನ್ಯ ಮುಖ್ಯ ಆಯುಕ್ತರು, ಬೃಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಹಣಕಾಸು) ಮತ್ತು ವಲಯ ಆಯುಕ್ತರು(ದ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು (ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
6. ಮಾನ್ಯ ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
7. ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
8. ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ಹನುಮಂತನಗರ ರವರ ಅವಗಾಹನೆಗೆ.
10. ಪೋಲೀಸ್ ಇನ್ಸ್‌ಪೆಕ್ಟರ್, ಕಾನೂನು ಸುವ್ಯವಸ್ಥೆ ಹನುಮಂತನಗರ/ಕೆಂಪೇಗೌಡನಗರ ಪೋಲೀಸ್ ಠಾಣೆ ರವರ ಅವಗಾಹನೆಗೆ.
11. ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಸಂಚಾರಿ ಪೋಲೀಸ್ ಠಾಣೆ ರವರ ಅವಗಾಹನೆಗೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ., ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
13. ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
14. ಕಛೇರಿ ಕಡತಕ್ಕೆ.

Scanned by Scanner Go